ಕರ್ನಾಟಕ ಸರ್ಕಾರದ ನಡವಳಿಗಳು.....

ವಿಷಯ: ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಲ್ಲಿ ಲಭ್ಯವಿರುವ ಹಣದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ :

(1) ಸರ್ಕಾರದ ಆದೇಶ ಸಂಖ್ಯೆ: ನಅಇ 200 ಬಿಎಂಆರ್ 2009, ದಿನಾಂಕ: 19-09-2011.

(2) ಸರ್ಕಾರದ ಆದೇಶ ಸಂಖ್ಯೆ: ನಅಇ 118 ಬಿಎಂಆರ್ 2015, ದಿನಾಂಕ: 24-06-2016.

(3) ಸರ್ಕಾರದ ಆದೇಶ ಸಂಖ್ಯೆ: ನಅಇ 118 ಬಿಎಂಆರ್ 2015, ದಿನಾಂಕ: 27-03-2017.

(4) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ:ಬಿಎಂಆರ್‌ಡಿಎ/ಬಿ.ಐ.ಎ.ಎ.ಪಿ.ಎ/ವರ್ಕ್ಸ್/51/2011-12, ದಿನಾಂಕ:21-2-2018.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಆದೇಶದಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಯೋಜನಾ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಹಣದಲ್ಲಿ ಶೇಕಡ 25ರಷ್ಟು ಹಣವನ್ನು ಆಡಳಿತಾತ್ಮಕ ವೆಚ್ಚಗಳಿಗೆ ಮೀಸಲಿರಿಸಿಕೊಂಡು ಉಳಿದ ಹಣದಲ್ಲಿ ರೂ.25.00 ಲಕ್ಷಗಳ ಪ್ರತಿ ಅಂದಾಜು ವೆಚ್ಚಗಳಿಗೆ ಕಡಿಮೆ ಇಲ್ಲದಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 68A (2)(c)ರಲ್ಲಿ ಅವಕಾಶ ಕಲ್ಪಿಸಿರುವಂತೆ ಕೆಲವು ಅಭಿವೃದ್ಧಿ ಕಾರ್ಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 200 ಬಿಎಂಆರ್ 2009, ದಿನಾಂಕ19-09-2011ನ್ನು ಹಿಂಪಡೆದು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ಸ್ಥಳೀಯ ಯೋಜನಾ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಹಣದ ಪೈಕಿ ಶೇ.60 ರಷ್ಟು ಮೊತ್ತವನ್ನು ಅನುಮೋದಿತ ಮಹಾಯೋಜನೆಗಳಲ್ಲಿನ ಉದ್ಯಾನವನ, ಇತ್ಯಾದಿ ಸಾರ್ವಜನಿಕ ಉಪಯೋಗದ ಜಾಗಗಳ ಭೂಸ್ವಾಧೀನಕ್ಕಾಗಿ, ಶೇ.15 ರಷ್ಟು ಮೊತ್ತವನ್ನು ಯೋಜನಾ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳಿಗಾಗಿ ವಿನಿಯೋಗಿಸಲು ಮತ್ತು ಉಳಿದ ಶೇ.25 ರಷ್ಟು ಮೊತ್ತದಲ್ಲಿ ಅನುಮೋದಿತ ರಚನಾ ನಕ್ಷೆ/ಪರಿಷ್ಕೃತ ರಚನಾ ನಕ್ಷೆ-2031, ಸಮಗ್ರ ಸಂಚಾರ ಮತ್ತು

ಸಾರಿಗೆ ಅಧ್ಯಯನ (CTTS) ಹಾಗೂ ಸ್ಥಳೀಯ ಯೋಜನಾ ಪ್ರದೇಶಗಳ ಅನುಮೋದಿತ ಮಹಾಯೋಜನೆಗಳಲ್ಲಿನ ಪ್ರಸ್ತಾಪಿತ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 68A (2)(C) ರನ್ವಯ ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಯೋಜನಾ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಹಣದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದಕ್ಕೆ ಸಂಬಂಧಿಸಿದಂತೆ ಮುಂದಿನ ಆದೇಶದವರೆಗೆ ಸರ್ಕಾರದ ಆದೇಶ ಸಂಖ್ಯೆ:ನಅಇ 200 ಬಿಎಂಆರ್ 2009, ದಿನಾಂಕ 19-09-2011 ರನ್ವಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪತ್ರದಲ್ಲಿ, ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ದಿನಾಂಕ:26-10-2017 ರಂದು ನಡೆದ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ 120ನೇ ಸಭೆಯ ವಿಷಯ ಸಂಖ್ಯೆ:120(12)ರಲ್ಲಿ ತೆಗೆದುಕೊಂಡ ನಿರ್ಣಯದಂತೆ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಲ್ಲಿ ಲಭ್ಯವಿರುವ ಹಣದಲ್ಲಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಒಟ್ಟು ರೂ.80.00ಲಕ್ಷದ ಅಂದಾಜು ಮೊತ್ತದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕೆ.ಟಿ.ಸಿ.ಪಿ. ಕಾಯ್ದೆ 1961ರ ಕಲಂ 68(ಎ)-2(ಸಿ)ರಡಿ ಸರ್ಕಾರದ ಆಡಳಿತಾತ್ಮಕ ಅನುಮೋದನೆ ಕೋರಿ ಅಂದಾಜು ಪಟ್ಟಿಗಳೊಂದಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 85 ಬಿಎಂಆರ್ 2018, ಬೆಂಗಳೂರು ದಿನಾಂಕ:05-06-2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಪ್ರಾಧಿಕಾರದಲ್ಲಿ ಲಭ್ಯವಿರುವ ಹಣದಲ್ಲಿ ಈ ಕೆಳಕಂಡ ಅಭಿವೃದ್ಧಿ ಕಾಮಗಾರಿಗಳನ್ನು ಒಟ್ಟು ರೂ.80.00 ಲಕ್ಷಗಳ ಅಂದಾಜು ವೆಚ್ಚದಲ್ಲಿ (ಎಂಬತ್ತು ಲಕ್ಷ ರೂಪಾಯಿಗಳು ಮಾತ್ರ) ಲೋಕೋಪಯೋಗಿ ಇಲಾಖೆ/ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮುಖಾಂತರ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಕೈಗೊಳ್ಳಲು ಕೆ.ಟಿ.ಸಿ.ಪಿ. ಕಾಯ್ದೆ, 1961ರ ಕಲಂ 68ಎ-2(ಸಿ)ರ ಅಡಿಯಲ್ಲಿ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ದೇವನಹಳ್ಳಿ ತಾಲ್ಲೂಕು

ಕ್ರ.ಸಂ	ಕಾಮಗಾರಿಗಳ ಹೆಸರು	ಅಂದಾಜು ಮೊತ್ತ ರೂ.ಲಕ್ಷಗಳಲ್ಲಿ
1	ದೇವನಹಳ್ಳಿ ತಾಲ್ಲೂಕು ಗಂಗವಾರಚೌಡಪ್ಪನಹಳ್ಳಿ ಗ್ರಾಮ ಪಂಚಾಯಿತಿ	
	ದೇವನಹಳ್ಳಿ ತಾಲ್ಲೂಕು, ಗಂಗವಾರಚೌಡಪ್ಪನಹಳ್ಳಿ ಪಂಚಾಯಿತಿಗೆ ಸೇರಿದ	**30-00**

	ಭಟ್ರಮಾರೇನಹಳ್ಳಿ, ಕಗ್ಗಲಹಳ್ಳಿ, ಕೊಂಡೇನಹಳ್ಳಿ ಮುರು ಗ್ರಾಮಗಳಿಗೆ ಅಭಿವೃದ್ಧಿ ಕಾಮಗಾರಿಗಳಿಗೆ ತಲಾ ರೂ. 10-00 ಲಕ್ಷಗಳು	
	ದೇವನಹಳ್ಳಿ ತಾಲ್ಲೂಕು, ಐಬಸಾಪುರ ಗ್ರಾಮ ಪಂಚಾಯಿತಿಯಡಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳು.	50.00
2	1. ಐಬಸಾಪುರ ಗ್ರಾಮದ ಸುರೇಶಪ್ಪನ ಮನೆಯಿಂದ ತಮ್ಮೇಗೌಡ ಮನೆಯವರೆಗೆ, ಆರ್.ಸಿ.ಸಿ ರಸ್ತೆ 2. ಐಬಸಾಪುರ ಗ್ರಾಮದ ಹಳೆಯ ಪಂಚಾಯ್ತಿ ಕಛೇರಿಯಿಂದ ಕೆಂಪೇಗೌಡ ಮನೆಯವರೆಗೆ ಆರ್.ಸಿ.ಸಿ. ರಸ್ತೆ 3. ಐಬಸಾಪುರ ಗ್ರಾಮದ ಹಳೆಯ ಪಂಚಾಯ್ತಿ ಕಛೇರಿಯಿಂದ ಕೆಂಪೇಗೌಡ ಮನೆಯವರೆಗೆ ಆರ್.ಸಿ.ಸಿ. ರಸ್ತೆ 4. ಐಬಸಾಪುರ ಗ್ರಾಮದ ಆಂಜಿನೇಯಸ್ವಾಮಿ ದೇವಸ್ಥಾನದಿಂದ ಸುಗಟೂರು ಮುಖ್ಯ ರಸ್ತೆಯವರೆಗೆ ಆರ್.ಸಿ.ಸಿ ರಸ್ತೆ 5. ಗೋಪಸಂದ್ರ ಗ್ರಾಮದ ತೆನೆಯೂರು ರಸ್ತೆಯಿಂದ ಕುಂಟೆ ಮಾರ್ಗ ಊರಿನ ಮುಖ್ಯ ರಸ್ತೆವರೆಗೆ ಆರ್.ಸಿ.ಸಿ ರಸ್ತೆ **ದೇವನಹಳ್ಳಿ ತಾಲ್ಲೂಕು, ಚನ್ನರಾಯಪಟ್ಟಣ ಗ್ರಾಮ ಪಂಚಾಯಿತಿಯಡಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳು.** 1. ಚನ್ನರಾಯಪಟ್ಟಣ ಮುಖ್ಯ ರಸ್ತೆಯಿಂದ ಸಿದ್ಧಪ್ಪನ ಮನೆಯವರೆಗೆ ಆರ್.ಸಿ.ಸಿ ರಸ್ತೆ 2. ನಾಗನಾಯಕನಹಳ್ಳಿ ಮುಖ್ಯ ರಸ್ತೆಯಿಂದ ಊರಿಗೆ ಹೋಗುವ ರಸ್ತೆ ಡಾಂಬರೀಕರಣ 3. ವರದೇನಹಳ್ಳಿ ಮುಖ್ಯ ರಸ್ತೆಯಿಂದ ನಾಗನಾಯಕನಹಳ್ಳಿ ಕಡೆಗೆ ಹೋಗುವ ಆರ್.ಸಿ.ಸಿ ಚರಂಡಿ ಕಾಮಗಾರಿ.	
	ಒಟ್ಟು	80.00 ಲಕ್ಷಗಳು

1. ಕಾಮಗಾರಿಗಳ ಅಂದಾಜು ಪಟ್ಟಿಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಮುಖ್ಯ ಇಂಜಿನಿಯರ್ ರವರಿಂದ ತಾಂತ್ರಿಕ ಪರಿಶೀಲನೆ ಮಾಡಿಸಿಕೊಂಡು ನಂತರ ಕೆ.ಟಿ.ಪಿ.ಪಿ. ಕಾಯ್ದೆಯನ್ವಯ ಟೆಂಡರ್ ಕರೆಯುವುದು;
2. ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ ಮತ್ತು ನಿಯಮಗಳನ್ವಯ ಕೈಗೊಂಡು ಟೆಂಡರ್‌ಗಳಿಗೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದುಕೊಳ್ಳುವುದು;
3. ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಿಂದ ನಿರ್ಮಿಸಲು 3rd Party Quality Monitoring System ಅನ್ನು ರೂಪಿಸಿಕೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು. ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಿಂದ ನಿರ್ಮಿಸಿರುವ ಬಗ್ಗೆ ಖಾತರಿಪಡಿಸಿಕೊಳ್ಳುವ ಜವಾಬ್ದಾರಿಯು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮಹಾನಗರ ಆಯುಕ್ತರದ್ದಾಗಿರುತ್ತದೆ.
4. ಪ್ರಸ್ತಾವನೆಯಲ್ಲಿನ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳುವ ಮೊದಲು ಸದರಿ ರಸ್ತೆಗಳಲ್ಲಿ ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿಗಳನ್ನು ನಿರ್ಮಿಸಿರುವ ಬಗ್ಗೆ ಖಾತರಿಪಡಿಸಿಕೊಂಡು ನಿಯಮಿತವಾಗಿ Utility Crossings ಗಳನ್ನು ಅಳವಡಿಸಿಕೊಂಡು ಮುಂದಿನ ಕನಿಷ್ಠ 15

ವರ್ಷಗಳವರೆಗೆ ಯಾವುದೇ ರಸ್ತೆ ಅಗೆತವಿಲ್ಲದ ಕಡೆಗಳಲ್ಲಿ ಮಾತ್ರ ಕಾಂಕ್ರೀಟ್ ಪೇವ್‌ಮೆಂಟ್ ನಿರ್ಮಾಣವನ್ನು ಕೈಗೊಳ್ಳುವುದು.

5. ಮೇಲಿನ ಕಾಮಗಾರಿಗಳು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ವ್ಯಾಪ್ತಿಯ ಪರಿಧಿಯಲ್ಲಿರುವ ಬಗ್ಗೆ ಮಹಾನಗರ ಆಯುಕ್ತರು ಬಿ.ಎಂ.ಆರ್.ಡಿ.ಎ. ಹಾಗೂ ಜಂಟಿ ನಿರ್ದೇಶಕರು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ರವರು ಮತ್ತೊಮ್ಮೆ ಖಾತರಿ ಪಡಿಸಿಕೊಳ್ಳತಕ್ಕದ್ದು ಹಾಗೂ ಮೇಲಿನ ಕಾಮಗಾರಿಗಳು ಸರ್ಕಾರದ ಇತರೆ ಯಾವುದೇ ಯೋಜನೆಗಳಲ್ಲಿ ಪುನರಾವರ್ತನೆಯಾಗದಿರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್. ಜಗದೀಶರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಇವರಿಗೆ,

(1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
(2) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಎಲ್.ಆರ್.ಡಿ.ಇ.ಬಿಲ್ಡಿಂಗ್, ಆಲಿ ಆಸ್ಕರ್ ರಸ್ತೆ, ಬೆಂಗಳೂರು.
(3) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
(4) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ.
(5) ಕಛೇರಿ ಪ್ರತಿ/ ಹೆಚ್ಚುವರಿ ಪ್ರತಿಗಳು.